# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ

C.C No.62/2017
CW-19 PW-3

ಹೆಸರು ಃ ಭೀಮರಾಯ ಮಾವನೂರ

ತಂದೆ ಹೆಸರು ಃ ಮಲ್ಲೇಶಪ್ಪ

ವಯಸ್ಸು ಃ 45 ವರ್ಷ

ಉದ್ಯೋಗ ಃ ಒಕ್ಕಲುತನ

ವಾಸ ಸ್ಥಳ ಃ ಸಂಗಾವಿ, ತಾ: ಕಾಳಗಿ.

---

**ಪ್ರಮಾಣವಚನ ಭೋಧಿಸಲಾಯಿತು. ದಿಃ 22-01-2025**

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ**

ನನಗೆ ಚಾಸಾ-18ರವರ ಪರಿಚಯ ಇರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ.

ಸುಮಾರು 7-8 ವರ್ಷಗಳ ಹಿಂದೆ ನಾನು ಮಾಡಬೂಳ ಕ್ರಾಸ್ ಬಳಿ ಹೋಟೆಲನಲ್ಲಿ ಕುಳಿತಾದ ಪೊಲೀಸರು ಒಂದು ದಾಖಲೆಗೆ ನನ್ನ ಸಹಿಯನ್ನು ಪಡೆದಿದ್ದರು. ಸಾಕ್ಷಿಯು ಅಮಾನತ್ತು ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಶಾನೆ ಪಿ-4 ಎಂದು, ಸಹಿಯನ್ನು ನಿಶಾನೆ ಪಿ-4(ಎ) ಎಂದು ಗುರುತಿಸಲಾಯಿತು. ನಿಶಾನೆ ಪಿ-4ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ವಾಹನವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ದಾಖಲೆಗಳನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅಭಿಯೋಜಕರವರಿಂದ**

ದಿನಾಂಕ: 21-12-2016ರಂದು ಮಧ್ಯಾಹ್ನ 3-00 ಗಂಟೆಯಿಂದ 3-30ರ ಸಮಯದವರೆಗೆ ಪೊಲೀಸರು ನನ್ನ ಸಮಕ್ಷಮ ನಿಶಾನೆ ಪಿ-4ರಂತೆ ಒಂದು ಪಂಚನಾಮೆ ಕ್ರಮವನ್ನು ಜರುಗಿಸಿ, ನನ್ನ ಸಮಕ್ಷಮ ಒಂದು ಮಹಿಂದ್ರಾ ಕಂಪನಿಯ ಬೊಲೆರೋ ಮ್ಯಕ್ಸಿ ಟ್ರಕ್ ವಾಹನವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ

ಎಂದರೆ ಸರಿಯಲ್ಲ. ನಿಶಾನೆ ಪಿ-4ರಲ್ಲಿ ಬರೆದಿರು ವಿಷಯಗಳು ನನಗೆ ಗೊತ್ತಿರುತ್ತವೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಸ್.ಎನ್.ಪಿ. ವಕೀಲರಿಂದ - ಏನು ಇಲ್ಲಾ**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು, ಚಿತ್ತಾಪೂರ.